ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 012. ದೂರವಾಣಿ: 080–23 460 460 (5 ಲೈನ್‌ಗಳು)
ವೆಬ್‌ಸೈಟ್: http://kea.kar.nic.in

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.09/2023–24 ದಿನಾಂಕ:09.01.2024

## ಅಧಿಸೂಚನೆ

## 2024–25 ನೇ ಸಾಲಿಗೆ ಕರ್ನಾಟಕದ ರಾಜ್ಯದಲ್ಲಿನ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ

1. ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿನ ಸರ್ಕಾರಿ ಸೀಟುಗಳ ಪ್ರವೇಶಕ್ಕಾಗಿ ಕರ್ನಾಟಕ ಅಭ್ಯರ್ಥಿಗಳ ಆಯ್ಕೆ, 2006 ನಿಯಮಗಳು (ತಿದ್ದುಪಡಿಗಳು) ನಿಯಮ 3, ನಿಯಮ 6 (3) ಮತ್ತು ನಿಯಮ (7) ರ ಅನ್ವಯ ಹಾಗು ಸರ್ಕಾರದ ಆದೇಶದ ಅನುಸಾರವಾಗಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, ಕರ್ನಾಟಕ **ಸಾಮಾನ್ಯ ಪ್ರವೇಶ ಪರೀಕ್ಷೆ–2024ಕ್ಕೆ,** ಅರ್ಹತೆ / ಮೆರಿಟ್‌ಅನ್ನು ಆಧರಿಸಿ, ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ / ವಿಶ್ವವಿದ್ಯಾಲಯ / ಖಾಸಗಿ ಅನುದಾನಿತ / ಖಾಸಗಿ ಅನುದಾನರಹಿತ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿರುವ ಇಂಜಿನಿಯರಿಂಗ್, ತಂತ್ರಜ್ಞಾನ, ಯೋಗ ಮತ್ತು ನ್ಯಾಚುರೋಪತಿ, ಬಿ–ಫಾರ್ಮ, 2ನೇ ವರ್ಷದ ಬಿ–ಫಾರ್ಮ ಮತ್ತು ಫಾರ್ಮಾ–ಡಿ, ಕೃಷಿ ವಿಜ್ಞಾನ ಕೋರ್ಸುಗಳು, ವೆಟರಿನರಿ ಹಾಗು ಬಿ.ಎಸ್.ಸಿ. (ನರ್ಸಿಂಗ್) ಕೋರ್ಸುಗಳಲ್ಲಿ ಲಭ್ಯವಿರುವ ಸರ್ಕಾರದ ಪಾಲಿನ ಸೀಟುಗಳಿಗೆ ಸಂಬಂಧಿಸಿದಂತೆ, ಪೂರ್ಣಾವಧಿ ಕೋರ್ಸುಗಳ ಮೊದಲನೇ ವರ್ಷಕ್ಕೆ ಅಥವಾ ಮೊದಲನೇ ಸೆಮಿಸ್ಟರ್‌ಗೆ ಸರ್ಕಾರವು ನೀಡುವ ಸೀಟ್ ಮ್ಯಾಟ್ರಿಕ್ಸ್ ನಂತೆ 2024–25ನೇ ಸಾಲಿಗೆ ಅನ್ವಯಿಸುವಂತೆ ಪ್ರವೇಶ ನೀಡುವುದಕ್ಕೆ ಅರ್ಹ ಕರ್ನಾಟಕದ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

2. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ಈ ಮೇಲಿನ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ ಪಡೆಯುವುದಕ್ಕೆ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸಿ, ಪ್ರವೇಶ ಪತ್ರ ಡೌನ್‌ಲೋಡ್ ಮಾಡಿಕೊಂಡು ನಂತರ ಕೆಇಎ ನಡೆಸುವ **ಸಾಮಾನ್ಯ ಪ್ರವೇಶ ಪರೀಕ್ಷೆ 2024ಕ್ಕೆ** ಹಾಜರಾಗಬೇಕಿರುತ್ತದೆ. ಆನ್‌ಲೈನ್ ಅರ್ಜಿ ಸಲ್ಲಿಸಿವಿಕೆಯು application-cum-verification module ಆಗಿರುವುದರಿಂದ ದಾಖಲೆಗಳ ಪರಿಶೀಲನೆ ಭೌತಿಕವಾಗಿ ಇರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಎಲ್ಲಾ ವಿವರಗಳನ್ನು ಕಡ್ಡಾಯವಾಗಿ ಎಚ್ಚರಿಕೆಯಿಂದ ಭರ್ತಿ ಮಾಡಲು ಮತ್ತು ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ.

   **ಕಡ್ಡಾಯ:** ಎಲ್ಲಾ ವೃತ್ತಿಪರ ಕೋರ್ಸುಗಳ ಸೀಟು ಹಂಚಿಕೆಗೆ ಅರ್ಜಿಯು ಸಾಮಾನ್ಯವಾಗಿರುತ್ತದೆ, ಅಂದರೆ ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ, ಇಂಜಿನಿಯರಿಂಗ್, ತಂತ್ರಜ್ಞಾನ, ಆರ್ಕಿಟೆಕ್ಚರ್, ಯೋಗ ಮತ್ತು ನ್ಯಾಚುರೋಪತಿ, ಬಿ–ಫಾರ್ಮ, 2ನೇ ವರ್ಷದ ಬಿ–ಫಾರ್ಮ ಮತ್ತು ಫಾರ್ಮಾ–ಡಿ, ಕೃಷಿ ವಿಜ್ಞಾನ ಕೋರ್ಸುಗಳು, ವೆಟರಿನರಿ ಹಾಗು ಬಿ.ಎಸ್.ಸಿ. (ನರ್ಸಿಂಗ್), ಬಿಪಿಟಿ, ಬಿಪಿಒ, ಬಿಎಸ್‌ಸಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳು. ಅಭ್ಯರ್ಥಿಗಳು ಸಿಇಟಿ–2024ಕ್ಕೆ ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸುವುದು ಕಡ್ಡಾಯವಾಗಿರುತ್ತದೆ. ನಂತರದ ದಿನಗಳಲ್ಲಿ ಅರ್ಜಿ ಸಲ್ಲಿಸಲು ಪೋರ್ಟಲ್ ತೆರೆಯಲಾಗುವುದಿಲ್ಲ ಎಂಬುದನ್ನು ಗಮನಿಸಿ. ಯುಜಿನೀಟ್–2024 ಫಲಿತಾಂಶಗಳ ಪ್ರಕಟಣೆಯ ನಂತರ ಕೆಇಎ ನಲ್ಲಿ ನೊಂದಾಯಿಸಲಾಗುವ ಅಭ್ಯರ್ಥಿಗಳಿಗೆ ಅವರ NEET ಸ್ಕೋರ್ ಮತ್ತು ರೋಲ್ ನಂಬರ್ ಅನ್ನು ದಾಖಲಿಸಲು ಇಂಟರ್‌ಫೇಸ್ ಅನ್ನು ನೀಡಲಾಗುವುದು.

3. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಸೀಟುಗಳ ಪ್ರವೇಶಕ್ಕಾಗಿ, ಕರ್ನಾಟಕ ಮತ್ತು ಕರ್ನಾಟಕೇತರ ಅಭ್ಯರ್ಥಿಗಳು, ಎನ್‌ಟಿಎ, ನವದೆಹಲಿ ಇವರು ನಡೆಸುವ **UGNEET–2024** ಕ್ಕೆ ನೊಂದಾಯಿಸಿ ಅರ್ಹತೆಯನ್ನು ಪಡೆದಿರಬೇಕು. (ಸಿಇಟಿ–2024ಕ್ಕೆ ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸುವುದು ಕಡ್ಡಾಯವಾಗಿರುತ್ತದೆ)

4. ಆರ್ಕಿಟೆಕ್ಚರ್ ಸೀಟುಗಳ ಪ್ರವೇಶಕ್ಕಾಗಿ ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ರವರು ನಡೆಸುವ **NATA-2024** ರಲ್ಲಿ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಅರ್ಹತೆಯನ್ನು ಪಡೆದಿರಬೇಕು. (ಸಿಇಟಿ–2024ಕ್ಕೆ ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸುವುದು ಕಡ್ಡಾಯವಾಗಿರುತ್ತದೆ)

5. ಸರ್ಕಾರದ ಆದೇಶ ಸಂಖ್ಯೆ ಎಂಇಡಿ 51 ಆರ್‌ಜಿಯು 2023 ದಿನಾಂಕ 13–04–2023 ರ ಅನ್ವಯ ಬಿ.ಎಸ್.ಸಿ (ನರ್ಸಿಂಗ್) ಕೋರ್ಸುಗಳ ಪ್ರವೇಶಕ್ಕೂ ಸಹ ಕರ್ನಾಟಕ ಮತ್ತು ಕರ್ನಾಟಕೇತರ ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕಿರುತ್ತದೆ. **ಕರ್ನಾಟಕೇತರ ಅಭ್ಯರ್ಥಿಗಳು ಇಂಜಿನಿಯರಿಂಗ್ ಮುಂತಾದ ಕೋರ್ಸುಗಳ ಪ್ರವೇಶಕ್ಕೆ ಅರ್ಹರಾಗುವುದಿಲ್ಲ ಮತ್ತು ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ.**

6. ಬಿಪಿಟಿ, ಬಿಪಿಒ, ಬಿಎಸ್‌ಸಿ ಅಲೈಡ್ ಹೆಲ್ತ್ ಸೈನ್ಸ್ ಕೋರ್ಸುಗಳ ಪ್ರವೇಶಾತಿಗೆ ಅರ್ಹತೆ ಪಡೆಯುವುದಕ್ಕಾಗಿ ಕರ್ನಾಟಕದ ಅಭ್ಯರ್ಥಿಗಳು ಸಿಇಟಿ–2024ಕ್ಕೆ ಆನ್‌ಲೈನ್ ಮೂಲಕ ನೊಂದಾಯಿಸಿಕೊಂಡು, ಆನ್‌ಲೈನ್ ಅರ್ಜಿ ಸಲ್ಲಿಸಿ, ಅರ್ಜಿ ಶುಲ್ಕ ಪಾವತಿಸುವುದು ಕಡ್ಡಾಯವಾಗಿರುತ್ತದೆ ಆದರೆ ಸಿಇಟಿ–2024 ರ ಪರೀಕ್ಷೆಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

**ಕರ್ನಾಟಕ ರಾಜ್ಯದಲ್ಲಿ ಯಾವುದೇ ವೃತ್ತಿಪರ ಕೋರ್ಸುಗಳ ಪ್ರವೇಶಕ್ಕಾಗಿ ಅನ್‌ಲೈನ್ ಮೂಲಕ ನೊಂದಾಯಿಸುವ ಮೊದಲು, ಅಭ್ಯರ್ಥಿಗಳು ಮಾಹಿತಿ ಪುಸ್ತಕವನ್ನು ಓದಲು, ಮತ್ತು ಅರ್ಹತಾ ಷರತ್ತುಗಳು, ಸೀಟುಗಳ ವರ್ಗೀಕರಣ (ವಿವಿಧ ವರ್ಗದ ಸೀಟುಗಳು) ಮತ್ತು ಅಂತಹ ಸೀಟುಗಳನ್ನು ಪಡೆಯಲು ಇರುವ ಅರ್ಹತೆಗಳನ್ನು ಅರ್ಥ ಮಾಡಿಕೊಳ್ಳಲು ಈ ಮೂಲಕ ತಿಳಿಸಲಾಗಿದೆ.**

**ಅರ್ಹತೆ:** ನಿಯಮ 5 (1) ರ Karnataka Selection of Candidates for Admission to Government seats in Professional Educational Institutions Rules, 2006, ಅನ್ವಯ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಭಾರತೀಯ ಪ್ರಜೆಯಾಗಿರಬೇಕು ಮತ್ತು ನಿಗದಿ ಪಡಿಸಿರುವ ಅರ್ಹತಾ ಕಂಡಿಕೆಗಳಲ್ಲಿ ಯಾವುದಾದರು ಒಂದರಲ್ಲಿ ಅರ್ಹತೆ ಹೊಂದಿರಬೇಕು, ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳು ಸರ್ಕಾರಿ ಕೋಟದ ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪಡೆಯಲು ಅರ್ಹತೆಯನ್ನು ಹೊಂದುವುದಿಲ್ಲ. Eligibility for OCI / PIO candidates for Government seats shall be as per the directions of the Government.

7. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿಧಾನ, ಅರ್ಹತಾ ಕಂಡಿಕೆಗಳು, ಶೈಕ್ಷಣಿಕ ಅರ್ಹತೆ ಹಾಗು ಇತರೆ ವಿವರಗಳನ್ನು ಒಳಗೊಂಡ **"ಯುಜಿಸಿಇಟಿ–2024–ಮಾಹಿತಿ ಪುಸ್ತಕ"** ವನ್ನು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ನಲ್ಲಿ ಪ್ರಚುರಪಡಿಸಲಾಗುವುದು. ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಅಭ್ಯರ್ಥಿಗಳು ಕೆಇಎ ನಡೆಸುವ ಸಿಇಟಿ ಮೂಲಕ ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶ ಪಡೆಯಲು ವಿವರಗಳನ್ನು ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿ ಸಲ್ಲಿಸಬೇಕು.

8. **ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ – ಶುಲ್ಕ ಪಾವತಿ – ವೇಳಾಪಟ್ಟಿ.**

| | | |
|---|---|---|
| I. | ಸಿಇಟಿ–2024ಕ್ಕೆ ನೊಂದಣಿ ಹಾಗು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **ದಿನಾಂಕ 10–01–2024 ರ ಬೆ.11.00 ರಿಂದ** |
| ii. | ಸಿಇಟಿ–2024ಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **10–02–2024 ರ ರಾತ್ರಿ 11.59 ರ ವರೆಗೆ** |
| iii. | ಸಿಇಟಿ–2024ಕ್ಕೆ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **14–02–2024** |
| iv. | ಸಿಇಟಿ–2024ಕ್ಕೆ ಪ್ರವೇಶ ಪತ್ರಗಳನ್ನು ಡೌನ್‌ಮಾಡಿಕೊಳ್ಳುವುದು | **07–04–2024 ರ ಬೆ. 11.00 ರ ನಂತರ** |

**ಕೃಷಿಕ ಕುಟುಂಬ ಕೋಟದ ಅಡಿಯಲ್ಲಿ ಸೀಟು ಆಯ್ಕೆ ಬಯಸುವ ಅಭ್ಯರ್ಥಿಗಳಿಗೆ ದಾಖಲೆಗಳ ಪರಿಶೀಲನೆ ಮತ್ತು ಪ್ರಾಯೋಗಿಕ ಪರೀಕ್ಷೆಯ ವೇಳಾಪಟ್ಟಿಯನ್ನು ಸದ್ಯದಲ್ಲಿಯೇ ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.**

**ಸಾಮಾನ್ಯ ಪ್ರವೇಶ ಪರೀಕ್ಷೆ – 2024ರ ವೇಳಾಪಟ್ಟಿ**

| ದಿನಾಂಕ | ದಿನ | ಸಮಯ | ವಿಷಯ | ಅಂಕಗಳು |
|---|---|---|---|---|
| **18–04–2024** | **ಗುರುವಾರ** | ಬೆಳಿಗ್ಗೆ 10.30 ರಿಂದ 11.50ರ ವರೆಗೆ | ಜೀವಶಾಸ್ತ್ರ | 60 |
| | | ಮಧ್ಯಾಹ್ನ 02.30 ರಿಂದ 03.50ರ ವರೆಗೆ | ಗಣಿತಶಾಸ್ತ್ರ | 60 |
| **19–04–2024** | **ಶುಕ್ರವಾರ** | ಬೆಳಿಗ್ಗೆ 10.30 ರಿಂದ 11.50ರ ವರೆಗೆ | ಭೌತಶಾಸ್ತ್ರ | 60 |
| | | ಮಧ್ಯಾಹ್ನ 02.30 ರಿಂದ 03.50ರ ವರೆಗೆ | ರಸಾಯನ ಶಾಸ್ತ್ರ | 60 |

| **ಹೊರನಾಡು ಹಾಗೂ ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ (ಬೆಂಗಳೂರು, ಬೀದರ್, ಬೆಳಗಾವಿ, ಬಳ್ಳಾರಿ, ವಿಜಯಪುರ, ಮಂಗಳೂರು ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ)** | | | | |
|---|---|---|---|---|
| **20–04–2024** | **ಶನಿವಾರ** | ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 12.30ರ ವರೆಗೆ | 4ನೇ ತರಗತಿಯ ಮಟ್ಟದ | 50 |

**ಸೂಚನೆ:**

1. ಸಾಮಾನ್ಯ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕರ್ನಾಟಕ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ನಿರ್ಧರಿಸುವ ಮೊದಲನೇ ಮತ್ತು ಎರಡನೇ ಪಿಯುಸಿ ಪಠ್ಯಕ್ರಮವನ್ನು ಅವಲಂಬಿಸಿರುತ್ತದೆ.
2. ಸಿಇಟಿ–2024 ಅರ್ಹತೆ: ಸಿಇಟಿ–2006ರ 15 (5) ಪ್ರವೇಶ ನಿಯಮಗಳು ಮತ್ತು ಎಮ್‌ಸಿಸಿ ನಿರ್ದೇಶನಗಳಿಗೆ ಒಳಪಟ್ಟಿರುತ್ತದೆ.
3. ನಿಗದಿಪಡಿಸಿರುವ ಶೈಕ್ಷಣಿಕೆ ಅರ್ಹತೆ / ಕಾಲೇಜುಗಳ ಪ್ರವೇಶ / ಸೀಟು ಹಂಚಿಕೆ ಇತ್ಯಾದಿಗಳು MCI, DCI, AICTE, COA, NCISM, NCH, PCI, ಸರ್ಕಾರ, ವಿಶ್ವವಿದ್ಯಾಲಯ, ಅಪೆಕ್ಸ್ ಸಂಸ್ಥೆಗಳು ಕಾಲ ಕಾಲಕ್ಕೆ ನಿಗದಿಡಿಸುವ ನಿಯಮಗಳಿಗೆ / ಅನುಮೋದನೆಗೆ / ಷರತ್ತಿಗೆ ಒಳಪಟ್ಟಿರುತ್ತವೆ.
4. ಒಂದಕ್ಕಿಂತ ಹೆಚ್ಚು ಅರ್ಜಿಯನ್ನು ಅಭ್ಯರ್ಥಿಯು ತುಂಬಿರುವುದು ಒಂದುವೇಳೆ ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವು ರದ್ದುಗೊಳ್ಳುವುದಕ್ಕೆ ಒಳಪಡುತ್ತದೆ.
5. ಅಭ್ಯರ್ಥಿಗಳು ಮಾಹಿತಿ ಪುಸ್ತಕವನ್ನು ಓದಿದ್ದಾರೆ ಮತ್ತು ಅದರಲ್ಲಿ ನೀಡಿರುವ ಷರತ್ತುಗಳನ್ನು ಮತ್ತು ಇತರೆ ನಿಯಮಗಳನ್ನು ಒಪ್ಪಿಕೊಂಡಿದ್ದಾರೆಂದು ಹಾಗು ನಂತರ ಯುಜಿಸಿಇಟಿ–2024 ಕ್ಕೆ ಆನ್‌ಲೈನ್ ಅರ್ಜಿಯನ್ನು ನಿಯಮಾನುಸಾರ ಸಲ್ಲಿಸಿರುತ್ತಾರೆಂದು ಪರಿಗಣಿಸಲಾಗುತ್ತದೆ.
6. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಬಗ್ಗೆ ಸಂದೇಹಗಳಿದ್ದಲ್ಲಿ, ಅವರು ಕರ್ನಾಟಕದಲ್ಲಿ ವ್ಯಾಸಂಗ ಮಾಡುತ್ತಿರುವ ಆಯಾ ಕಾಲೇಜುಗಳಲ್ಲಿ ಕಾಲೇಜು ಟ್ರೈನರ್ ಗಳನ್ನು ಸಂಪರ್ಕಿಸಿ ಸಂದೇಹಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ.

ಸಹಿ/–
(ಎಸ್. ರಮ್ಯ, ಭಾ.ಆ.ಸೇ.)
ಕಾರ್ಯನಿರ್ವಾಹಕ ನಿರ್ದೇಶಕರು

ವಾಸಾಸಂಇ/ವಾಪ್ರ/2958/2023–24

KEA Mobile App https://kea.kar.nic.in keaugcet24@gmail.com
ಕೆಇಎ ಸಹಾಯವಾಣಿ ಸಂಖ್ಯೆಗಳು: 080 – 23 460 460 (ಐದು ಲೈನುಗಳು–ಬೆ. 9.30 ರಿಂದ ಸಂ. 6.00 – ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ)

12x38Cms